ಧರ್ಮಸ್ಥಳದಲ್ಲಿ ಗ್ರಾಮಾಭಿವೃದ್ಧಿ ಯೋಜನೆ ಬಗ್ಗೆ

೪೦೬೫ ಶ್ರೀ ವಸಂತ ಬಂಗೇರಾ (ಬೆಳ್ತಂಗಡಿ).—ಮಾನ್ಯ ಮುಖ್ಯ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?

ಅ) ಶ್ರೀ ಕ್ಷೇತ್ರ ಧರ್ಮಸ್ಥಳದ ವತಿಯಿಂದ ಧರ್ಮಾಧಿಕಾರಿಗಳು ಬೆಳ್ತಂಗಡಿ ತಾಲ್ಲೂಕಿನ ೮೧ ಗ್ರಾಮಗಳನ್ನು ದತ್ತು ಸ್ವೀಕಾರ ಮಾಡಿ ಗ್ರಾಮಾಭಿವೃದ್ಧಿ ಯೋಜನೆಯನ್ನು ಹಮ್ಮಿಕೊಂಡಿರುವ ವಿಚಾರ ಸರಕಾರದ ಗಮನಕ್ಕೆ ಬಂದಿದೆಯೆ ?

ಆ) ಧರ್ಮಾಧಿಕಾರಿಯವರು ಹಮ್ಮಿಕೊಂಡ ಗ್ರಾಮಾಭಿವೃದ್ಧಿ ಯೋಜನೆಯು ಸರಕಾರದ ಯೋಜನೆಗಳಿಗಿಂತ ಉತ್ತಮ ರೀತಿಯಲ್ಲಿ ಫಲಪ್ರದವಾಗಿದೆ ಎಂಬ ವಿಚಾರ ಸರಕಾರದ ಗಮನಕ್ಕೆ ಬಂದಿದೆಯೆ ?

ಇ) ರಾಜ್ಯದಲ್ಲಿ ಈ ರೀತಿಯ ಯೋಜನೆಗಳನ್ನು ಹಮ್ಮಿಕೊಂಡಿರುವ ಧರ್ಮ ಸಂಸ್ಥೆಗಳು ಎಷ್ಟು ?

ಶ್ರೀ ಎಸ್. ಆರ್. ಬೊಮ್ಮಾಯಿ (ಮುಖ್ಯ ಮಂತ್ರಿಗಳು).—

ಅ) ಬಂದಿರುತ್ತದೆ.

ಆ) ಧರ್ಮಾಧಿಕಾರಿಯವರು ಗ್ರಾಮಾಭಿವೃದ್ಧಿ ಯೋಜನೆಯನ್ನು ಅವರದೇ ಆದ ರೀತಿಯಲ್ಲಿ ಅನುಷ್ಠಾನಗೊಳಿಸುತ್ತಿರುವುದರಿಂದ ಸರ್ಕಾರದ ಯೋಜನೆಗಿಂತ ಉತ್ತಮ ರೀತಿಯಲ್ಲಿ ಫಲಪ್ರದವಾಗಿದೆ ಎಂಬ ವಿಚಾರ ಸರಿಯಲ್ಲ.

ಇ) ಅಂತಹ ಸಂಸ್ಥೆಗಳು ಸರಕಾರದ ಗಮನಕ್ಕೆ ಬಂದಿರುವುದಿಲ್ಲ.

ವಿಶ್ವಕನ್ನಡ ಸಮ್ಮೇಳನದಲ್ಲಿ ಭಾಗವಹಿಸಿದ ಅಧಿಕಾರಿಗಳ ಬಗ್ಗೆ

೪೦೫೫ ಶ್ರೀ ಬಿ. ಬಸವಲಿಂಗಪ್ಪ (ಯಲಹಂಕ).—ಮಾನ್ಯ ವಾರ್ತಾ, ಪ್ರವಾಸೋದ್ಯಮ ಮತ್ತು ಸಂಸ್ಕೃತಿ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?

ಅ) ೧೯೮೮ರ ಆಗಸ್ಟ್ ತಿಂಗಳಲ್ಲಿ ನಡೆದ ವಿಶ್ವ ಕನ್ನಡ ಸಮ್ಮೇಳನದಲ್ಲಿ ಭಾಗವಹಿಸಿದ ಮಂತ್ರಿಗಳ ಸಂಖ್ಯೆ.

ಆ) ಈ ಸಮ್ಮೇಳನದಲ್ಲಿ ಭಾಗವಹಿಸಿದ ಅಧಿಕಾರಿಗಳ ಸಂಖ್ಯೆ ಅವರ ಪದನಾಮ ಹಾಗೂ ಅವರ ಅವಶ್ಯಕತೆ.

ಶ್ರೀ ಎಂ. ಪಿ. ಪ್ರಕಾಶ್, (ವಾರ್ತಾ, ಪ್ರವಾಸೋದ್ಯಮ ಮತ್ತು ಸಂಸ್ಕೃತಿ ಮಂತ್ರಿಗಳು).—

ಅ) ಮಾನ್ಯ ಮುಖ್ಯಮಂತ್ರಿಗಳೂ ಸೇರಿದಂತೆ ಮೂವರು ಸಚಿವರುಗಳು.

ಆ) ನಾಲ್ವರು ಅಧಿಕಾರಿಗಳು, ಕನ್ನಡ ಸಂಸ್ಕೃತಿ ಇಲಾಖೆಯ ನಿರ್ದೇಶಕರು, ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಏರ್ಪಡಿಸಲು ಹಾಗೂ ವಾರ್ತಾ ಮತ್ತು ಪ್ರಚಾರ ಇಲಾಖೆಯ ಉಪನಿರ್ದೇಶಕರು ಮತ್ತು ಒಬ್ಬ ಹಿರಿಯ ಕಲಾಕಾರರು ವಸ್ತು ಪ್ರದರ್ಶನ ಏರ್ಪಾಡಿಗಾಗಿ ಮತ್ತು ವಾರ್ತಾ ಮತ್ತು ಪ್ರಚಾರ ಇಲಾಖೆಯ ನಿರ್ದೇಶಕರು ಮೇಲಿನ ಎಲ್ಲಾ ಕಾರ್ಯಕ್ರಮಗಳನ್ನು ಸಮನ್ವಯಗೊಳಿಸುವುದಕ್ಕಾಗಿ, ಇವರುಗಳ ಸೇವೆಯು ಅವಶ್ಯವಾಗಿತ್ತು.